# ಅಂಗನವಾಡಿ ಕಾರ್ಯಕರ್ತೆ /ಸಹಾಯಕಿಯರ ಹುದ್ದೆಗಳಿಗೆ ಅರ್ಜಿ

KarnatakaHelp.in

ಮೂಡಲಗಿ: ಕರ್ನಾಟಕ ಸರಕಾರ ಮಹಿಳಾ ಮತು ಮಕ್ಕಳ ಅಭಿವೃದ್ಧಿ ಇಲಾಖೆ ಶಿಶು ಅಭಿವೃದ್ಧಿ ಯೋಜನೆ ಅರಭಾವಿ ವ್ಯಾಪ್ತಿಯಲ್ಲಿ ಖಾಲಿ ಇರುವ 15 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 50 ಸಹಾಯಕಿಯರ ಹುದ್ದೆಗಳಿಗೆ 19-35 ವರ್ಷದೊಳಗಿನ ಅರ್ಹ ಮಹಿಳಾ ಮತ್ತು ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಕರೆಯಲಾಗಿದೆ ಎಂದು ಸಿಡಿಪಿಒ ಯಲ್ಲಪ್ಪ ಗದಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಲು ಪ್ರಾರಂಭ ಏ.16 ಆಗಿದ್ದು, ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಆನ್ ಲೈನಲ್ಲಿ ಸಲ್ಲಿಸಬಹುದಾಗಿದೆ ಮೇ.16 ರಂದು ಅರ್ಜಿಸಲ್ಲಿಸಲು ಕೊನೆಯ ದಿನವಾಗಿರುತ್ತದೆ. 05/07/2024ರಂದು ಹೊರಡಿಸಿದ ನೇಮಕಾತಿ ಅಧಿಸೂಚನೆಯನ್ನು ತಾಂತ್ರಿಕ ಕಾರಣಗಳಿಂದ ರದ್ದು ಪಡಿಸಲಾಗಿರುತ್ತದೆ. 05/07/2024ರ ಪ್ರಕಟಣೆ ಯಂತೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮೊತ್ತೊಮ್ಮೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ವಿವರವಾದ ಅಧಿಸೂಚನೆ (ಪ್ರಕಟಣೆ)ಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಮೂಡಲಗಿ, ತಹಸೀಲ್ದಾರ್ ಕಚೇರಿ ಮೂಡಲಗಿ, ತಾಲೂಕು ಪಂಚಾಯತಿ ಕಚೇರಿ ಮೂಡಲಗಿ ಹಾಗೂ ಆಯಾ ಪುರಸಭೆ, ಪಟ್ಟಣ ಪಂಚಾಯತಿ, ಗ್ರಾಮ ಪಂಚಾಯತಿ ಮತ್ತು ಸಂಬಂಧಿಸಿದ ಅಂಗನವಾಡಿ ಕೇಂದ್ರಗಳ ನೋಟಿಸ್ ಬೋರ್ಡ್‌ನ ಮೇಲೆ ಪ್ರಕಟಿಸಲಾಗಿದೆ. ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಮೂಡಲಗಿ ದೂ.08334-200367 ಸಂಪರ್ಕಿಸಲು ಕೋರಿದೆ. ಆನ್‌ಲೈನ್ ಅರ್ಜಿಗಾಗಿ **https://karnemakaone.kar.nic.in/abcd** ಭೇಟಿ ನೀಡಿ.